**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 708 (828)

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಉತ್ತರಿಸುವ ದಿನಾಂಕ : 10.03.2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಮಾನ್ಯ ಬೃಹತ್ ಕೈಗಾರಿಕಾ ಸಚಿವರು ಮತ್ತು ಹಿರಿಯ ಅಧಿಕಾರಿಗಳು ಪ್ರಪಂಚ ಆರ್ಥಿಕ ವೇದಿಕೆ (World Economic Forum) ದಾವೂಸ್ ನಲ್ಲಿ ಜನವರಿ 2026ರಂದು ಆಯೋಜಿಸಿದ್ದ ವಾರ್ಷಿಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರೆ, ಭಾಗಿಯಾಗಿದ್ದಲ್ಲಿ ಈ ಕಾರ್ಯಕ್ರಮದ ಮೂಲಕ ಎಷ್ಟು ವಿದೇಶ ಕಂಪನಿಗಳನ್ನು ರಾಜ್ಯದಲ್ಲಿ ಬಂಡವಾಳ ಹೂಡಲು ಆಹ್ವಾನಿಸಲಾಗಿದೆ; | ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಮತ್ತು ಹಿರಿಯ ಅಧಿಕಾರಿಗಳ ನಿಯೋಗವು ಜನವರಿ 2026 ರಲ್ಲಿ ಸ್ವಿಟ್ಜರ್ಲ್ಯಾಂಡ್‌ನ ದಾವೋಸ್ ನಲ್ಲಿ ನಡೆದ World Economic Forum ವಾರ್ಷಿಕ ಸಭೆಯಲ್ಲಿ ಭಾಗವಹಿಸಿದ್ದು, ಈ ಕಾರ್ಯಕ್ರಮದ ವೇಳೆ ಜಾಗತಿಕ ಮಟ್ಟದ ಕೈಗಾರಿಕಾ ಸಂಸ್ಥೆಗಳು, ಹೂಡಿಕೆದಾರರು ಹಾಗೂ ಆರ್ಥಿಕ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಹಲವು ಸಂವಾದ ಸಭೆಗಳನ್ನು ನಡೆಸಲಾಗಿದೆ. ಈ ಕಾರ್ಯಕ್ರಮದ ಅಂಗವಾಗಿ ಒಟ್ಟು 30 ವಿದೇಶಿ ಕಂಪನಿಗಳು ಮತ್ತು ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆಗಳನ್ನು ನಡೆಸಿ, ಕರ್ನಾಟಕ ರಾಜ್ಯದಲ್ಲಿ ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಆಹ್ವಾನಿಸಲಾಗಿದೆ.<br><br>ಈ ಸಂದರ್ಭದಲ್ಲಿ ಒಟ್ಟು ಸುಮಾರು 30 ಅಂತಾರಾಷ್ಟ್ರೀಯ ಕಂಪನಿಗಳು ಹಾಗೂ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆಗಳು ನಡೆದಿವೆ. ಅವುಗಳಲ್ಲಿ ಪ್ರಮುಖವಾಗಿ Menzies Aviation, The Coca-Cola Company, Anheuser-Busch InBev, Xylem, Octopus Energy, Imperial College London, Carlsberg Group, Philip Morris International, PayPal, Lenovo, Axon Cable, Schneider Electric, Nokia, Volvo Group, Amazon (AWS), Cloudflare, Mistral AI, Sify, Boston Consulting Group ಸೇರಿದಂತೆ ಹಲವು ಸಂಸ್ಥೆಗಳು ರಾಜ್ಯದಲ್ಲಿ ಹೂಡಿಕೆ ಸಾಧ್ಯತೆಗಳ ಕುರಿತು ಆಸಕ್ತಿ ವ್ಯಕ್ತಪಡಿಸಿವೆ.<br><br>ಈ ಸಭೆಗಳ ಸಂದರ್ಭದಲ್ಲಿ ರಾಜ್ಯದಲ್ಲಿನ ಕೈಗಾರಿಕಾ ಮೂಲಸೌಕರ್ಯ, ಹೂಡಿಕೆದಾರ ಸ್ನೇಹಿ ನೀತಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಲಭ್ಯವಿರುವ ಹೂಡಿಕೆ ಅವಕಾಶಗಳ ಕುರಿತು ಪರಸ್ಪರ ಸಂವಾದಗಳು ನಡೆದಿವೆ. ಸಂಬಂಧಿತ ಕಂಪನಿಗಳೊಂದಿಗೆ ಚರ್ಚೆಗಳು ಪ್ರಾಥಮಿಕ ಹಂತದಲ್ಲಿದ್ದು, ಅವರು ಕೈಗೊಳ್ಳಬಹುದಾದ ಹೂಡಿಕೆ ಯೋಜನೆಗಳ ಸ್ವರೂಪ ಮತ್ತು ವ್ಯಾಪ್ತಿ ಅಂತಿಮಗೊಂಡ ನಂತರ ರಾಜ್ಯದಲ್ಲಿ ಸೃಷ್ಟಿಯಾಗಬಹುದಾದ ಉದ್ಯೋಗಾವಕಾಶಗಳ ವಿವರ ಸ್ಪಷ್ಟವಾಗುತ್ತದೆ. |
| ಆ | ಪ್ರಪಂಚ ಆರ್ಥಿಕ ವೇದಿಕೆ (World Economic Forum) ದಾವೂಸ್ ಕಾರ್ಯಕ್ರಮದ ಮೂಲಕ ಬಂಡವಾಳ ಉತ್ತೇಜಿಸಲು ಎಷ್ಟು ಸಭೆಗಳನ್ನು ಆಯೋಜಿಸಲಾಗಿತ್ತು ಯಾವ ಯಾವ ವಿದೇಶ ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡಲು ಆಸಕ್ತಿಯನ್ನು ವ್ಯಕ್ತಪಡಿಸಿರುತ್ತವೆ; ಇದರಿಂದ ರಾಜ್ಯದ ಎಷ್ಟು ಮಂದಿಗೆ ಉದ್ಯೋಗ ಅವಕಾಶಗಳು ದೊರೆಯಬಹುದು; | |

<table>
<tr>
<td>ಇ</td>
<td>ರಾಜ್ಯದ ಬೃಹತ್ ಕೈಗಾರಿಕಾ ಇಲಾಖೆಯ ವಿದೇಶಿ ಬಂಡವಾಳ ಹೂಡಿಕೆಗೆ ರಾಜ್ಯದಲ್ಲಿ ಕೈಗೊಂಡಿರುವ ನೀತಿ ಮತ್ತು ಯೋಜನೆಯೇನು; ಈ ಸಂಬಂಧ ಕಳೆದ 3 ವರ್ಷಗಳಲ್ಲಿ ಎಷ್ಟು ಉನ್ನತ ಸಮಿತಿಯ ಸಭೆಗಳನ್ನು ಆಯೋಜಿಸಲಾಗಿರುತ್ತದೆ; (ವಿವರಗಳನ್ನು ಒದಗಿಸುವುದು)</td>
<td>ರಾಜ್ಯದಲ್ಲಿ ವಿದೇಶಿ ಬಂಡವಾಳ ಸೇರಿದಂತೆ ಕೈಗಾರಿಕಾ ಹೂಡಿಕೆಗಳನ್ನು ಉತ್ತೇಜಿಸುವ ಉದ್ದೇಶದಿಂದ ಸರ್ಕಾರವು ಕೈಗಾರಿಕಾ ಸ್ನೇಹಿ ನೀತಿಗಳು ಮತ್ತು ವಿವಿಧ ಪ್ರೋತ್ಸಾಹ ಕ್ರಮಗಳನ್ನು ಜಾರಿಗೆ ತಂದಿದೆ. ಹೂಡಿಕೆದಾರರಿಗೆ ಅಗತ್ಯ ಅನುಮೋದನೆಗಳನ್ನು ಸುಗಮವಾಗಿ ಮತ್ತು ತ್ವರಿತವಾಗಿ ನೀಡುವ ಸಲುವಾಗಿ ಏಕಗವಾಕ್ಷಿ ವ್ಯವಸ್ಥೆ ಜಾರಿಯಲ್ಲಿದೆ.<br><br>ಕಳೆದ 3 ವರ್ಷಗಳಲ್ಲಿ ಒಟ್ಟು 9 ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಸಭೆಗಳನ್ನು ಆಯೋಜಿಸಲಾಗಿದೆ. ಈ ಸಭೆಗಳಲ್ಲಿ ಒಟ್ಟು 114 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.402877.05 ಕೋಟಿ ಬಂಡವಾಳ ಹೂಡಿಕೆ ಮತ್ತು 283566 ಉದ್ಯೋಗ ಸೃಜನೆ ನಿರೀಕ್ಷಿಸಲಾಗಿದೆ.</td>
</tr>
<tr>
<td>ಈ</td>
<td>ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಹೂಡಿಕೆಯಾಗಿರುವ ವಿದೇಶಿ ಬಂಡವಾಳ ಎಷ್ಟು ಮತ್ತು ಇದರಿಂದ ರಾಜ್ಯದಲ್ಲಿ ಎಷ್ಟು ಉದ್ಯೋಗ ಅವಕಾಶಗಳು ಸೃಷ್ಟಿಯಾಗಿರುತ್ತದೆ?</td>
<td>ಕಳೆದ 3 ವರ್ಷಗಳಲ್ಲಿ 2022-23ನೇ ಸಾಲಿನ ಏಪ್ರಿಲ್ ಮಾಹೆಯಿಂದ 2025-26ನೇ ಸಾಲಿನ ಡಿಸೆಂಬರ್ ಮಾಹೆಯ ಅಂತ್ಯದವರೆಗೆ ರಾಜ್ಯದಲ್ಲಿ ಹೂಡಿಕೆಯಾಗಿರುವ ವಿದೇಶಿ ನೇರ ಬಂಡವಾಳ ವಿವರ ಕೆಳಕಂಡಂತಿದೆ. ಇದರಿಂದ 81165 ಉದ್ಯೋಗ ಸೃಜನೆಯಾಗಿದೆ.
<table>
<tr><th>ಹೂಡಿಕೆ ಯಾದ ಮೊತ್ತ</th><th>2022-23</th><th>2023-24</th><th>2024-25</th><th>2025-26 (ಏಪ್ರಿಲ್ ನಿಂದ ಡಿಸೆಂಬರ್ ಅಂತ್ಯಕ್ಕೆ)</th></tr>
<tr><td>Rupees Crores</td><td>83628</td><td>54427</td><td>56030</td><td>96644</td></tr>
<tr><td>USD Million</td><td>10429</td><td>6571</td><td>6619</td><td>11159</td></tr>
<tr><td>Rank</td><td>2</td><td>3</td><td>2</td><td>2</td></tr>
</table>
</td>
</tr>
</table>

ಸಿಐ 41 ಎಸ್‌ಪಿಐ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು